**Bangalore**
**Regional News**
**30.06.2026 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಗೆ ಚಾಲನೆ; ಬೂತ್‌ಮಟ್ಟದ ಅಧಿಕಾರಿಗಳಿಂದ ಮನೆ - ಮನೆ ಭೇಟಿ

೨. ಮತದಾನದ ಹಕ್ಕು ಕಳೆದುಕೊಂಡರೆ, ಗ್ಯಾರಂಟಿ ಯೋಜನೆ ನೀಡುವುದು ಅಸಾಧ್ಯ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ಮಾದಕವಸ್ತು ಮುಕ್ತ ಕರ್ನಾಟಕ ಮಾಡಲು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ರಾಜ್ಯ ಸರ್ಕಾರ ಮನವಿ

೪. ಹಾವೇರಿಯಲ್ಲಿ ಹೋರಿ ಬೆದರಿಸುವ ವೇಳೆ ಘರ್ಷಣೆ; ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಬಿಜೆಪಿ ಆಗ್ರಹ

೫. ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಇಂದಿನಿದ ಎರಡು ದಿನಗಳ ಕಾಲ ಭಾರೀ ಮಳೆ; ಆರೆಂಜ್ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

**<><*<><>*><>**

ರಾಜ್ಯದಲ್ಲಿ ಇಂದಿನಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-ಎಸ್‌ಐಆರ್ ೨೦೨೬ ಆರಂಭಗೊಂಡಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ್ಮ ನಿವಾಸದಲ್ಲಿ ಅಧಿಕಾರಿಗಳಿಂದ ಗಣತಿ ನಮೂನೆ ಪಡೆದು, ಭರ್ತಿ ಮಾಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು. ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿ ಯಶವಂತ್ ಗುರ್‌ಕರ್ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಪತ್ನಿ ಉಷಾ ಶಿವಕುಮಾರ್ ಗಣತಿ ನಮೂನೆ ಭರ್ತಿಮಾಡಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ, ನಾಗರಿಕರು ತಮ್ಮ ಮತದಾನದ ಹಕ್ಕು ಉಳಿಸಿಕೊಳ್ಳಬೇಕು. ಇಲ್ಲವಾದರೆ, ಸರ್ಕಾರದ ಸೌಲಭ್ಯಗಳನ್ನು ಪಡೆಯುವುದು ಕಷ್ಟಕರವಾಗಲಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಮತದಾನದ ಹಕ್ಕು ಇಲ್ಲದವರಿಗೆ ಯಾಕೆ ಗ್ಯಾರಂಟಿ ಯೋಜನೆಗಳನ್ನು ನೀಡಬೇಕು ಎಂದು ಪ್ರಶ್ನಿಸಿದ್ದಾರೆ.

<><*<><>*><>

ರಾಜ್ಯದ ಇತರೆಡೆಯೂ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಆರಂಭವಾಗಿದೆ. ಐದು ಕೋಟಿ ೫೪ ಲಕ್ಷ ಮತದಾರರ ಪರಿಷ್ಕರಣೆಗೆ ಚುನಾವಣಾ ಆಯೋಗ ನಿರ್ಧರಿಸಿದ್ದು, ೫೯ ಸಾವಿರಕ್ಕೂ ಹೆಚ್ಚು ಬೂತ್‌ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದಾರೆ. ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಬೆಂಗಳೂರಿನಲ್ಲಿ ತಮ್ಮ ಗಣತಿ ನಮೂನೆ ವೈಯಕ್ತಿಕವಾಗಿ ಭರ್ತಿಮಾಡಿ, ಎಲ್ಲಾ ಅರ್ಹ ಮತದಾರರು ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಒತ್ತಾಯಿಸಿದರು. ನಾಗರಿಕರು, ಚುನಾವಣಾ ಅಧಿಕಾರಿಗಳೊಂದಿಗೆ ಸಹಕರಿಸುವಂತೆ ಮನವಿ ಮಾಡಿದರು. ಬೆಂಗಳೂರಿನ ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್.ಜಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಅಧಿಕೃತ ನಿವಾಸಕ್ಕೆ ತೆರಳಿ, ಗಣತಿ ನಮೂನೆ ಅರ್ಜಿಯನ್ನು ನೀಡುವ ಮೂಲಕ ಚಾಲನೆ ನೀಡಿದರು. ಹಾಸನದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಚಾಲನೆ ದೊರೆತಿದ್ದು ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತರಾದ ಸಾಹಿತಿ ಭಾನು ಮುಷ್ತಾಕ್ ಅವರ ನಿವಾಸಕ್ಕೆ ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಭೇಟಿ ನೀಡಿ ಅರ್ಜಿ ಭರ್ತಿ ಮಾಡಿಸುವ ಮೂಲಕ ಚಾಲನೆ ನೀಡಿದರು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನದ ಅಂಗವಾಗಿ ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ನವನಗರದ ವಿವಿಧ ಮನೆಗಳಿಗೆ ಭೇಟಿ ನೀಡಿ ಎನ್ಯೂಮರೇಷನ್ ನಮೂನೆಗಳನ್ನು ವಿತರಿಸಿದರು. ಪದ್ಮಶ್ರೀ ಪುರಸ್ಕೃತ ವೆಂಕಣ್ಣ ಸುಗತೇಕರ ಅವರ ನಿವಾಸಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ, ನಮೂನೆ ಭರ್ತಿ ಮಾಡುವ ವಿಧಾನ ಹಾಗೂ ಅಗತ್ಯ ದಾಖಲೆಗಳ ಕುರಿತು ಮಾಹಿತಿ ನೀಡಿ, ನಿಗದಿತ ಅವಧಿಯೊಳಗೆ ಭರ್ತಿ ಮಾಡಿ ಸಲ್ಲಿಸುವಂತೆ ಮನವಿ ಮಾಡಿದರು. ಗದಗ ನಗರದ ಅಭಿನವ ಶಿವಾನಂದ ಶ್ರೀಗಳಿಗೆ ಗಣತಿ ನಮೂನೆ ನೀಡುವ ಮೂಲಕ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಎಸ್ ಐ ಆರ್ ಅಭಿಯಾನಕ್ಕೆ ಚಾಲನೆ ನೀಡಿದರು.

<><*<><>*><>

ರಾಜ್ಯ ಸಚಿವ ಸಂಪುಟವು, ಮತದಾರರ ಪಟ್ಟಿಗಳ ಪಾರದರ್ಶಕ ಮತ್ತು ಪುರಾವೆ ಆಧರಿತ ಪರಿಷ್ಕರಣೆಗೆ ಬೆಂಬಲ ಸೂಚಿಸಿದೆ. ಆದರೆ, ಪ್ರಸ್ತುತ ಎಸ್‌ಐಆರ್ ಚೌಕಟ್ಟಿನಲ್ಲಿರುವ ಸಂಭಾವ್ಯ ಮತದಾನದ ಹಕ್ಕುಗಳ ವಂಚನೆಯ ಬಗ್ಗೆ ಕಳವಳ ವ್ಯಕ್ತಪಡಿಸಿದೆ. ರಾಜ್ಯದಲ್ಲಿ ಎಸ್‌ಐಆರ್ ಅನುಷ್ಠಾನಗೊಳಿಸುವ ಮೊದಲು ಚುನಾವಣಾ ಆಯೋಗವು, ರಾಜ್ಯದಲ್ಲಿ ಸ್ವತಂತ್ರ ಪರಿಶೀಲನೆ, ಸಮಯ ಮಿತಿ ವಿಸ್ತರಣೆ, ಕ್ಷೇತ್ರ ಪರಿಶೀಲನೆ ಮತ್ತು ದೋಷಗಳ ತಿದ್ದುಪಡಿ, ಮತದಾರರ ಹಕ್ಕು ರಕ್ಷಣೆ, ನಮೂನೆಗಳ ಪ್ರಕ್ರಿಯೆ, ವಿಶೇಷ ಸುರಕ್ಷತಾ ಕ್ರಮಗಳು, ಅಧಿಕಾರಿಗಳ ಪಾತ್ರದ ಸ್ಪಷ್ಟತೆ ಕುರಿತಂತೆ ಕ್ರಮ ಕೈಗೊಳ್ಳಬೇಕು ಎಂಬ ನಿರ್ಣಯವನ್ನು ಸಚಿವ ಸಂಪುಟ ಕೈಗೊಂಡಿದೆ.

<><*<><>*><>

ರಾಜ್ಯವನ್ನು ಮಾದಕವಸ್ತು ಮುಕ್ತ ಕರ್ನಾಟಕ ಮಾಡಲು ಸಹಕರಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ, ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಇಂದು ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳ ಸಾಗಣೆ ವಿರೋಧಿ ದಿನ - ೨೦೨೫ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದ ಜೊತೆ ಪೋಷಕರು, ವಿದ್ಯಾರ್ಥಿಗಳು, ಶಾಲಾ-ಕಾಲೇಜುಗಳು ಕೈಜೋಡಿಸುವಂತೆ ಮನವಿ ಮಾಡಿದ್ದಾರೆ. ಇದೇ ವೇಳೆ ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಮಾದಕ ವಸ್ತುಗಳು ಓರ್ವ ವ್ಯಕ್ತಿಗೆ ಮಾತ್ರ ಹಾನಿ ಮಾಡುವುದಿಲ್ಲ, ಕುಟುಂಬ ಹಾಗೂ ಇಡೀ ಭವಿಷ್ಯವನ್ನೇ ಸದ್ದಿಲ್ಲದೆ ನಾಶಮಾಡಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಮಾದಕ ವ್ಯಸನ ಮುಕ್ತ ರಾಜ್ಯ ಕುರಿತಂತೆ ಪ್ರತಿಜ್ಞೆ ಸ್ವೀಕರಿಸಿದರು. ಸಮಾರಂಭದಲ್ಲಿ ಶಾಸಕ ರಿಜ್ವಾನ್ ಅರ್ಷದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಎಂ ಎ ಸಲೀಮ್, ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ನರೆಗಲ್ ಗ್ರಾಮದಲ್ಲಿ ನಡೆದ ಹಿಂಸಾತ್ಮಕ ಘಟನೆ ಅತ್ಯಂತ ಹೇಯ ಕೃತ್ಯವಾಗಿದ್ದು, ಸಮಾಜದಲ್ಲಿ ಕೋಮು ಸೌಹಾರ್ದತೆಯನ್ನು ಕದಡುವ ಯತ್ನ ನಡೆದಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಉದ್ದೇಶ ಪೂರ್ವಕವಾಗಿ ಹೋರಿ ಬೆದರಿಸುವ ಯುವಕರ ಮೇಲೆ ಹಲ್ಲೆ ಮಾಡಲಾಗಿದ್ದು, ಕೂಡಲೇ ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಆಗ್ರಹಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪೊಲಿಸ್ ಇಲಾಖೆ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡುವಂತೆ ಒತ್ತಾಯಿಸಿದ್ದಾರೆ. ಹಾವೇರಿ ಕಾರಹುಣ್ಣಿಮೆ ಹಿಂಸಾಚಾರಕ್ಕೆ ಕಾಂಗ್ರೆಸ್‌ನ ಓಲೈಕೆ ರಾಜಕೀಯವೇ ಕಾರಣ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಸಾಂಪ್ರದಾಯಿಕ ಗೂಳಿ ಓಟದಲ್ಲಿ ಭಾಗವಹಿಸಿದ್ದ ರೈತರ ಮೇಲೆ ದಾಳಿ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿಂದು ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಬೆಂಗಳೂರಿನ ಬಿಜೆಪಿ ನಾಯಕರು ಮಹತ್ವದ ಸಭೆ ನಡೆಸಿದರು. ಸಭೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಎಸ್‌ಐಆರ್ ಅನ್ನು ಪರಿಣಾಮಕಾರಿಯಾಗಿ ನಡೆಸುವುದು, ವಾರ್ಡ್‌ವಾರು ಮತದಾರರ ಪಟ್ಟಿಯ ಪರಿಷ್ಕರಣೆ, ಪ್ರತಿ

ವಾರ್ಡ್‌ಗೆ ಆಕಾಂಕ್ಷಿಗಳ ಪಟ್ಟಿಯನ್ನು ಸಿದ್ಧಪಡಿಸುವುದು ಹಾಗೂ ಮುಂಬರುವ ಬೆಂಗಳೂರು ಮಹಾನಗರ ಚುನಾವಣೆಯಲ್ಲಿ ಬಿಜೆಪಿ ವಿಜಯ ಸಾಧಿಸುವ ನಿಟ್ಟಿನಲ್ಲಿ ಸಮಗ್ರ ಕಾರ್ಯತಂತ್ರವನ್ನು ರೂಪಿಸಲಾಗಿದೆ. ಸಭೆಯಲ್ಲಿ ಬೆಂಗಳೂರಿನ ಸಂಸದರು ಹಾಗೂ ಶಾಸಕರು ಪಾಲ್ಗೊಂಡಿದ್ದರು.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಭಾರತ ಸರ್ಕಾರದ ವಾರ್ತಾ ಶಾಖೆ ಜುಲೈ ೨ ರಂದು ಕೋಲಾರದ ಮಾಧ್ಯಮ ಪ್ರತಿನಿಧಿಗಳಿಗಾಗಿ ಒಂದು ದಿನದ "ವಾರ್ತಾಲಾಪ" ಕಾರ್ಯಗಾರ ಹಮ್ಮಿಕೊಂಡಿದೆ. “ವಾರ್ತಾಲಾಪ"ದಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳು ಹಾಗೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಯೋಜನೆಗಳ ಕುರಿತು ಮಾಹಿತಿ ನೀಡುವ ಉದ್ದೇಶ ಹೊಂದಲಾಗಿದೆ. ಜಿಲ್ಲಾ ಮತ್ತು ಗ್ರಾಮೀಣ ಭಾಗದಲ್ಲಿ ಯೋಜನೆಗಳ ಅನುಷ್ಠಾನದ ಕುರಿತು ಮಾಧ್ಯಮ ಪ್ರತಿನಿಧಿಗಳಿಗಾಗಿ ಅಗತ್ಯ ಮಾಹಿತಿಯನ್ನು ಒದಗಿಸುವ ಧ್ಯೆಯೋದ್ದೇಶ ಹೊಂದಲಾಗಿದೆ. ವಾರ್ತಾಲಾಪದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಮಾಧ್ಯಮ ಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗಿಯಾಗಿ ತಮ್ಮ ಅಭಿಪ್ರಾಯ ಮತ್ತು ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ.

<><*<><>*><>

ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯ ಅಪಘಾತ ವಲಯಗಳಲ್ಲಿ ರಸ್ತೆ ಸುರಕ್ಷತಾ ಕ್ರಮಗಳನ್ನು ತ್ವರಿತವಾಗಿ ಜಾರಿಗೊಳಿಸಿ ಸಾರ್ವಜನಿಕರ ಜೀವ ರಕ್ಷಣೆಗೆ ಮೊದಲ ಆದ್ಯತೆ ನೀಡಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹೆಚ್ಚು ಅಪಘಾತ ನಡೆಯುವ ಸ್ಥಳಗಳಲ್ಲಿ ಅಗತ್ಯ ಸುರಕ್ಷತಾ ವ್ಯವಸ್ಥೆ ಕಲ್ಪಿಸುವಂತೆ ನಿರ್ದೇಶನ ನೀಡಿದ್ದಾರೆ. ಅಪಘಾತಗಳನ್ನು ತಡೆಗಟ್ಟಲು ರಸ್ತೆ ಸೂಚನಾ ಫಲಕಗಳು, ವೈಜ್ಞಾನಿಕ ಮಾದರಿಯ ವೇಗ ನಿಯಂತ್ರಕಗಳು, ರಬ್ಬರ್ ಸ್ಟ್ರಿಪ್‌ಗಳು, ರಸ್ತೆ ಸ್ಟಡ್ಸ್ ಹಾಗೂ ಇತರೆ ಸುರಕ್ಷತಾ ವ್ಯವಸ್ಥೆಗಳನ್ನು ಆದ್ಯತೆಯ ಮೇರೆಗೆ ಅಳವಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

## ಇನ್ನು ಹವಾವರ್ತಮಾನ...

ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಮುಂದಿನ ಎರಡು ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನಚ್ಚರಿಕೆ ನೀಡಿದೆ. ಕರಾವಳಿ ಜಿಲ್ಲೆಗಳಾದ ಉತ್ತರಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಮಳೆಯೊಂದಿಗೆ ಬಲವಾದ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನಿಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**